<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ರಾಮನಗರ.</u>

<u>ಸಿ.ಸಿ. ನಂ.20/2022</u>

CW-8/PW-7

| | | |
|---|---|---|
| ಹೆಸರು | : | ಮಂಜುನಾಥ |
| ತಂದೆ ಹೆಸರು | : | ಲೇಟ್ ಸಿದ್ದಾಚಾರ್ |
| ವಯಸ್ಸು | : | 46 ವರ್ಷ |
| ವೃತ್ತಿ | : | ಮರಗೆಲಸ |
| ವಾಸ ಸ್ಥಳ | : | ಬಿಡದಿ |
| ದಿನಾಂಕ | : | 06-08-2026. |

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:-</u>

ಚಾಸಾ-1 ನನಗೆ ಗೊತ್ತು. ಐದಾರು ವರ್ಷಗಳ ಹಿಂದೆ ಬಿಡದಿ ಪೊಲೀಸ್ ಠಾಣೆಯಲ್ಲಿ ಚಿನ್ನದ ಸರ ಕಳ್ಳತನದ ವಿಚಾರವಾಗಿ ಪೊಲೀಸರು ಸಹಿ ಹಾಕು ಎಂದು ಹೇಳಿ ಹಾಕಿಸಿಕೊಂಡರು. ಚಿನ್ನದ ಸರವನ್ನು ಪೊಲೀಸರು ಚಾಸಾ-1ರವರಿಗೆ ಪೊಲೀಸ್ ಠಾಣೆಯಲ್ಲಿ ಬಿಡುಗಡೆ ಮಾಡಿದರು. ಆ ಕಾಲಕ್ಕೆ ಪೊಲೀಸರು ಮಹಜರ್ ಮಾಡಿಕೊಂಡರು. ಆಗ ಸಹಿ ಹಾಕಿರುತ್ತೇನೆ. ಸದರಿ ಮಹಜರನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ, ನಿಪಿ-3ರಲ್ಲಿ ನನ್ನ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಿರುತ್ತೇನೆ.

<u>ಪಾಟೀ ಸವಾಲು ಆರೋಪಿ ಪರ:-</u>

ಆರೋಪಿ ಹಾಜರಿದ್ದು, ಆರೋಪಿ ಪರ ವಕೀಲರು ಗೈರು ಹಾಜರಿದ್ದು, ಆರೋಪಿಗೆ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೇಳಲಾಗಿ ಪಾಟೀ

ಸವಾಲು ಮಾಡಿರುವುದಿಲ್ಲ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**(ಲೋಕೇಶ)**
ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು.
ರಾಮನಗರ.